ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 5/7/19

# 'ಕಚೇರಿಯಲ್ಲೇ ಕಾಯ್ತಿದೀನಿ, ಯಾರೂ ರಾಜೀನಾಮೆ ಕೊಡ್ತಿಲ್ಲ'

ಉ.ವಾ. 5/7/19

**ಬೆಂಗಳೂರು:** 'ನಾನೂ ಪ್ರತಿ ದಿನ ನೂರು ಕಿಲೋ ಮೀಟರ್‌ನಿಂದ ಬಂದು ಕಚೇರಿಯಲ್ಲಿ ಕಾಯ್ತಿದೀನಿ. ಯಾರೂ ರಾಜೀನಾಮೆ ನೀಡಲು ಬರುತ್ತಿಲ್ಲ' ಎಂದು ಅತೃಪ್ತ ಶಾಸಕರ ರಾಜೀನಾಮೆ ವದಂತಿ ಬಗ್ಗೆ ಸ್ಪೀಕರ್ ರಮೇಶ್ ಕುಮಾರ್ ಹಾಸ್ಯ ಚಟಾಕಿ ಹಾರಿಸಿದರು.



ಗುರುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರತಿ ದಿನ ಬಂದು ಯಾರಾದರೂ ರಾಜೀನಾಮೆ ಕೊಡುತ್ತಾರೋ ಎಂದು ಕಚೇರಿಯಲ್ಲಿ ಕಾಯುತ್ತಿದ್ದೇನೆ. ಶಾಸಕರು ಯಾರೂ ಬಂದು ರಾಜೀನಾಮೆ ನೀಡಲು ಅನುಮತಿ ಕೇಳುತ್ತಿಲ್ಲ. ಮಾಧ್ಯಮದವರೇ ಬಂದು ಅನುಮತಿ ಕೇಳುತ್ತಿದ್ದಾರೆ ಎಂದು ಹೇಳಿದರು.

ಇದೇ ವೇಳೆ, ಕಾಂಗ್ರೆಸ್ ಶಾಸಕ ರಮೇಶ್ ಜಾರಕಿಹೊಳಿ ರಾಜೀನಾಮೆ ಕುರಿತು ಕೇಳಿದ ಪ್ರಶ್ನೆಗೆ ಅಸಮಾಧಾನ ಹೊರ ಹಾಕಿದ ಅವರು, ಮಾಡಲಿಕ್ಕೆ ಕೆಲಸ ಇಲ್ಲದವರು ರಾಜೀನಾಮೆ ನೀಡುತ್ತೇನೆಂದು ಹೇಳುತ್ತಾರೆ. ಇದು ಗೌರವಸ್ಥರು ಮಾಡುವ ಕೆಲಸವಲ್ಲ, ರಾಜಕಾರಣದಲ್ಲಿ ಗುಮಾನಿ, ಗುಟ್ಟು ಇರಬಾರದು. ಗುಟ್ಟಾಗಿ ಏನೇ ಮಾಡಿದರೂ ಅದು ವ್ಯಾಪಾರವಾಗುತ್ತದೆ. ನಾನು ಪ್ರಜಾತಂತ್ರ ವ್ಯವಸ್ಥೆಯಲ್ಲಿ ಕೆಲಸ ಮಾಡುತ್ತಿದ್ದೇನೆ. ರಾಜೀನಾಮೆ ನೀಡುತ್ತೇನೆಂದು ಹೇಳಿ ಸ್ವತಃ ದಾರಿ ತಪ್ಪಿದವರನ್ನು ನನ್ನ ಬಳಿ ಕರೆದುಕೊಂಡು ಬನ್ನಿ ಎಂದು ಖಾರವಾಗಿ ನುಡಿದರು.

ಇನ್ನು ಕಾಂಗ್ರೆಸ್‌ನವರು ಆನಂದ್‌ಸಿಂಗ್ ವಿರುದ್ಧ ಯಾವುದೇ ದೂರು ಕೊಡಲು ಬಂದಿರಲಿಲ್ಲ. ಯಾರೂ ದೂರು ಕೊಟ್ಟಿಲ್ಲ. ಆನಂದ್ ಸಿಂಗ್ ರಾಜೀನಾಮೆ ನೀಡಿರುವ ಬಗ್ಗೆ ಮಾಹಿತಿ ನೀಡಿದ್ದೇನೆ. ಮಳೆಗಾಲದ ಅಧಿವೇಶನದ ಬಗ್ಗೆ ಔಪಚಾರಿಕವಾಗಿ ತಿಳಿಸಲು ಬಂದಿದ್ದರು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪ್ರತಿಪಕ್ಷದ ನಾಯಕ ಬಿ.ಎಸ್.ಯಡಿಯೂರಪ್ಪ ಅವರ ವಿರುದ್ಧ ಕೇಳಿ ಬಂದಿದ್ದ ಆಪರೇಷನ್ ಕಮಲದ ಆಡಿಯೋ ಬಗ್ಗೆ ತನಿಖೆ ನಡೆಸಲು ಎಸ್‌ಐಟಿ ರಚನೆ ವಿಳಂಬ ಆಗಿರುವ ಬಗ್ಗೆ ಸ್ಪೀಕರ್ ಬೇಸರ ವ್ಯಕ್ತಪಡಿಸಿದರು.

**ಬಿಜೆಪಿ ನಿಯೋಗ ಭೇಟಿ:** ಬಿಜೆಪಿ ಶಾಸಕರು ವಿಧಾನಸಭಾಧ್ಯಕ್ಷರನ್ನು ಭೇಟಿ ಮಾಡಲು ಗುರುವಾರ ಅವರ ಕಚೇರಿಗೆ ಆಗಮಿಸಿದಾಗ ರಮೇಶ್ ಕುಮಾರ್ ಅವರು ಮೈತ್ರಿ ಸರ್ಕಾರದ ಸಮನ್ವಯ ಸಮಿತಿ ಅಧ್ಯಕ್ಷ ಸಿದ್ದರಾಮಯ್ಯ ಅವರಿಗೆ ನೀಡಿರುವ ಕೊಠಡಿಯಲ್ಲಿ ಕುಳಿತುಕೊಂಡಿದ್ದರು. ಸಿ.ಟಿ. ರವಿ ನೇತೃತ್ವದ ಬಿಜೆಪಿ ಶಾಸಕರ ನಿಯೋಗ ಸ್ಪೀಕರ್ ಅವರನ್ನು ಅವರಿಗೆ ಮೀಸಲಾದ ಕೊಠಡಿಯಲ್ಲಿಯೇ ಭೇಟಿ ಮಾಡಲು ನಿರ್ಧರಿಸಿ, ಸಿದ್ದರಾಮಯ್ಯ ಅವರಿಗೆ ನೀಡಿರುವ ಕೊಠಡಿಯಲ್ಲಿ ಭೇಟಿ ಮಾಡಲು ನಿರಾಕರಿಸಿದರು. ಆದ್ದರಿಂದ ಸ್ಪೀಕರ್ ವಿಧಾನಸೌಧದ ಮೊದಲನೇ ಮಹಡಿಯಲ್ಲಿ ತಮಗೆ ನೀಡಿರುವ ಕೊಠಡಿಯಲ್ಲಿಯೇ ಬಿಜೆಪಿ ಶಾಸಕರನ್ನು ಭೇಟಿ ಮಾಡಿ ಅವರ ಅಹವಾಲು ಸ್ವೀಕರಿಸಿದರು.

## ರಾಜೀನಾಮೆ ಅಂಗೀಕರಿಸದಂತೆ ಕೆಪಿಸಿಸಿಯಿಂದ ಸ್ಪೀಕರ್‌ಗೆ ಮನವಿ

**ಬೆಂಗಳೂರು:** ವಿಜಯನಗರ (ಹೊಸಪೇಟೆ) ಕ್ಷೇತ್ರದ ಶಾಸಕ ಸ್ಥಾನಕ್ಕೆ ಆನಂದ್ ಸಿಂಗ್ ನೀಡಿರುವ ರಾಜೀನಾಮೆಯನ್ನು ಅಂಗೀಕರಿಸದಂತೆ ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ್ ಖಂಡ್ರೆ ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಅವರಿಗೆ ಮನವಿ ಮಾಡಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಅವರೊಂದಿಗೆ ಸಭಾಧ್ಯಕ್ಷ ರಮೇಶ್ ಕುಮಾರ್ ಅವರನ್ನು ಭೇಟಿ ಮಾಡಿ, ಆನಂದ್ ಸಿಂಗ್ ಕಾಂಗ್ರೆಸ್ ಪಕ್ಷದ ಬಿ.ಫಾರಂ ಪಡೆದು ಶಾಸಕರಾಗಿ ಆಯ್ಕೆಯಾಗಿದ್ದು ಅವರ ರಾಜೀನಾಮೆಯ ಬಗ್ಗೆ ಪಕ್ಷಕ್ಕೆ ಯಾವುದೇ ರೀತಿಯ ಮಾಹಿತಿ ನೀಡಿಲ್ಲ. ಹೀಗಾಗಿ ಅವರ ರಾಜೀನಾಮೆಯನ್ನು ಅಂಗೀಕರಿಸಬಾರದು ಎಂದು ಮನವಿ ಮಾಡಿದ್ದಾರೆ.

ಸ್ಪೀಕರ್ ಭೇಟಿ ನಂತರ ಮಾತನಾಡಿದ ಈಶ್ವರ್ ಖಂಡ್ರೆ, ಆನಂದ್ ಸಿಂಗ್ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಆದರೆ, ಪಕ್ಷಕ್ಕೆ ಯಾವುದೇ ರಾಜೀನಾಮೆ ಪತ್ರ ನೀಡಿಲ್ಲ. ವಿಜಯನಗರ ಕ್ಷೇತ್ರದಿಂದ ನಮ್ಮ ಪಕ್ಷದಿಂದ ಟಿಕೆಟ್ ಪಡೆದು ಆಯ್ಕೆಯಾಗಿದ್ದರು. ಈಗ ವಿಧಾನಸಭಾಧ್ಯಕ್ಷರಿಗೆ ರಾಜೀನಾಮೆ ನೀಡಿದ್ದಾರೆ. ನಾವು ಅವರ ವಿರುದ್ಧ ಯಾವುದೇ ದೂರು ಕೊಟ್ಟಿಲ್ಲ. ಆದರೆ, ಆನಂದ್ ಸಿಂಗ್ ಯಾಕೆ ರಾಜೀನಾಮೆ ಸಲ್ಲಿಸಿದ್ದಾರೆಂಬ ಮಾಹಿತಿ ಪಡೆದುಕೊಂಡಿದ್ದೇವೆ ಎಂದರು. ಅವರ ರಾಜೀನಾಮೆ ಅಂಗೀಕರಿಸದಂತೆ ಸ್ಪೀಕರ್‌ಗೆ ಮನವಿಯನ್ನೂ ನೀಡಿಲ್ಲ. ರಾಜೀನಾಮೆ ಕುರಿತು ಪಕ್ಷದ ನಾಯಕರ ಜೊತೆ ಚರ್ಚಿಸಿ, ರಾಜೀನಾಮೆ ಅಂಗೀಕಾರ ಮಾಡದಂತೆ ಸ್ಪೀಕರ್‌ಗೆ ದೂರು ಕೊಡುವ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.